## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಉಡುಪಿ ಜಿಲ್ಲೆ ಉಡುಪಿ ತಾಲ್ಲೂಕಿನ ಕರ್ಜೆ ಗ್ರಾಮ ಪಂಚಾಯತ್ ಹೊಸೂರು ಗ್ರಾಮದ ಕೆಳಬೆಟ್ಟು ಜನವಸತಿ ಪ್ರದೇಶಕ್ಕೆ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಕೇಂದ್ರ ಪುರಸ್ಕೃತ NRDWP ಯೋಜನೆಯಡಿ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ಕಡತ ಸಂಖ್ಯೆ: ಗ್ರಾಅಪ/514/ಗ್ರಾ.ಕು.ನೀ.ನೈ.ಇ./2017-18ರಲ್ಲಿನ ಪುಟ ಸಂಖ್ಯೆ 3 ರಿಂದ 4ರಲ್ಲಿನ ಅನುಮೋದಿತ ಟಿಪ್ಪಣಿಗಳು
2. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ54/ಗ್ರಾನೀಸ(2)/2016, ದಿನಾಂಕ:03.04.2017
3. ಮಾನ್ಯ ಮೀನುಗಾರಿಕೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ರಾಜ್ಯ ಸಚಿವರು (ಸ್ವತಂತ್ರ ಪ್ರಭಾರ)ರವರ ಪತ್ರ ಸಂಖ್ಯೆ:ಮೀ.ಯು.ಸ.ಕ್ರೀ/ಸ./ಟಿ./1850/2016-17, ದಿನಾಂಕ:27.02.2017

--

**ಪೀಠಿಕೆ:**

ಮೇಲೆ (3)ರಲ್ಲಿ ಓದಲಾದ ಮಾನ್ಯ ಮೀನುಗಾರಿಕೆ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ರಾಜ್ಯ ಸಚಿವರು (ಸ್ವತಂತ್ರ ಪ್ರಭಾರ)ರವರ ಪತ್ರದಲ್ಲಿ, ಉಡುಪಿ ಜಿಲ್ಲೆ ಉಡುಪಿ ತಾಲ್ಲೂಕಿನ ಕರ್ಜೆ ಗ್ರಾಮ ಪಂಚಾಯತ್ ಹೊಸೂರು ಗ್ರಾಮದ ಕೆಳಬೆಟ್ಟು ಜನವಸತಿ ಪ್ರದೇಶಕ್ಕೆ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಕಾಮಗಾರಿಗೆ ತಗಲುವ ರೂ.68.00ಲಕ್ಷ ಅಂದಾಜು ಮೊತ್ತಕ್ಕೆ ಸರ್ಕಾರದ ಅನುಮೋದನೆ ನೀಡುವಂತೆ ಕೋರಿರುತ್ತಾರೆ. ಆದರೆ, ಮೇಲೆ (1)ರಲ್ಲಿ ಓದಲಾದ ಟಿಪ್ಪಣಿಗಳ ಅನುಸಾರ ಉದ್ದೇಶಿತ ಯೋಜನೆಯನ್ನು 2017-18ರ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಅಳವಡಿಸಿರುವುದಿಲ್ಲ. ಸದರಿ ಪ್ರಸ್ತಾವನೆಯು ಪಂಪು-ಮೋಟರುಗಳ ಅಳವಡಿಕೆ, ಕುಡಿಯುವ ನೀರು ಪೈಪ್‌ಲೈನ್, ಮೇಲ್ಮಟ್ಟದ ಜಲ ಸಂಗ್ರಹಾಗಾರ ಕಲ್ಪಿಸುವ ಕಾಮಗಾರಿಯಾಗಿರುವುದರ ಮೇರೆಗೆ, ಕುಡಿಯುವ ನೀರಿನ ಸರಬರಾಜಿನಲ್ಲಿ ಯಾವುದೇ ಅಡಚಣೆ ಹಾಗೂ ತೊಂದರೆಯಾಗುವುದನ್ನು ತಪ್ಪಿಸುವ ಉದ್ದೇಶದಿಂದ ವಿಶೇಷ ಪ್ರಕರಣವೆಂದು ಪರಿಗಣಿಸಿ, ಕೇಂದ್ರ ಪುರಸ್ಕೃತ NRDWP ಯೋಜನೆಯಡಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ಗ್ರಾನೀಸ(2) 2018 ಬೆಂಗಳೂರು, ದಿನಾಂಕ:16.01.2018**

ಉಡುಪಿ ಜಿಲ್ಲೆ ಉಡುಪಿ ತಾಲ್ಲೂಕಿನ ಕರ್ಜೆ ಗ್ರಾಮ ಪಂಚಾಯತ್ ಹೊಸೂರು ಗ್ರಾಮದ ಕೆಳಬೆಟ್ಟು ಜನವಸತಿ ಪ್ರದೇಶಕ್ಕೆ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಕಾಮಗಾರಿಗಳಾದ ಪಂಪು-ಮೋಟರುಗಳ ಅಳವಡಿಕೆ, ಕುಡಿಯುವ ನೀರು ಪೈಪ್‌ಲೈನ್, ಮೇಲ್ಮಟ್ಟದ ಜಲ ಸಂಗ್ರಹಾಗಾರ ಕಲ್ಪಿಸುವ ಕಾಮಗಾರಿಗಳಿಗೆ ತಗಲುವ ಒಟ್ಟು **ರೂ.68.00ಲಕ್ಷ (ಒಟ್ಟು ಮೊತ್ತ ಅರವತ್ತೆಂಟು ಲಕ್ಷ ರೂಪಾಯಿಗಳು)** ಅಂದಾಜು ಮೊತ್ತಕ್ಕೆ, ಕೇಂದ್ರ ಪುರಸ್ಕೃತ NRDWP ಯೋಜನೆಯಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

1. ಅನುಮೋದಿತ ಕಾಮಗಾರಿಗಳನ್ನು ಬೇರೆ ಯಾವುದೇ ಯೋಜನೆಯಡಿ ಕೈಗೊಂಡಿಲ್ಲವೆಂಬ ಅಂಶವನ್ನು ಖಾತರಿಪಡಿಸಿಕೊಂಡು, ನಿಯಮಾನುಸಾರ ಕ್ರಮವಹಿಸುವುದು.
2. ಈ ಆದೇಶದಡಿ ಅನುಮೋದನೆಯಾದ ಕುಡಿಯುವ ನೀರಿನ ಯೋಜನೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE, RDW&SD ದೃಢೀಕರಿಸಿದ ತಾಂತ್ರಿಕ ಅನುಮೋದನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ.
3. ಯೋಜನೆಯನ್ನು ಚಾಲ್ತಿ ಪಾರದರ್ಶಕ (KTPP ಕಾಯ್ದೆಯನ್ವಯ) ನೀತಿಯನ್ವಯ ಅನುಷ್ಠಾನಗೊಳಿಸತಕ್ಕದ್ದು.
4. ಸದರಿ ಕಾಮಗಾರಿಯನ್ನು 2017-18ನೇ ಸಾಲಿನಲ್ಲಿ ಕೈಗೆತ್ತಿಕೊಂಡು, ಪೂರ್ಣಗೊಳಿಸುವ ಷರತ್ತಿನೊಂದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

ಆಯುಕ್ತರು ಹಾಗೂ
ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು–2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು–1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು–1.
8. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು–1.
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು–1.
10. ಸರ್ಕಾರದ ಆಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು–560009.
12. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಉಡುಪಿ**.
13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ / ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, **ಉಡುಪಿ**.
14. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವೃತ್ತ ಕಛೇರಿ, **ಮೈಸೂರು**.
15. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಉಡುಪಿ**.
16. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ (TNMC), ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
17. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
18. ಆಯುಕ್ತರು ಹಾಗೂ ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, RDWSD/ ರವರ ಆಪ್ತ ಸಹಾಯಕರು
19. ಆಂತರಿಕ ಆರ್ಥಿಕ ಸಕಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು
20. ಮುಖ್ಯ ಲೆಕ್ಕಾಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.
21. ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು–9.
22. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ (10 ಪ್ರತಿಗಳು).
27. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.